All India Radio: Bangalore
National Bulletin In Kannada
03.05.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<><><*><><<>

ಮುಖ್ಯಾಂಶಗಳು

೧. ಪಶ್ಚಿಮ ಬಂಗಾಳದ ದಕ್ಷಿಣ ೨೪ ಪರಗಣ ಜಿಲ್ಲೆಯ ಫಾಲ್ಟಾ ವಿಧಾನಸಭಾ ಕ್ಷೇತ್ರದ ಎಲ್ಲಾ ೨೮೫ ಮತಗಟ್ಟೆಗಳಲ್ಲಿ ಇದೇ ೨೧ ರಂದು ಮರು ಮತದಾನ

೨. ಕರ್ನಾಟಕದ ದೊಡ್ಡಬಳ್ಳಾಪುರದಲ್ಲಿ ಇಂದು ನೂತನ ಇಎಸ್‌ಐಸಿ ಆಸ್ಪತ್ರೆ ಉದ್ಘಾಟಿಸಲಿರುವ ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವೀಯಾ

೩. ದೇಶಾದ್ಯಂತ ಇಂದು ಪದವಿಪೂರ್ವ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ -ನೀಟ್ ಯುಜಿ

೪. ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್‌ಗೆ ೮ ವಿಕೆಟ್‌ಗಳ ಜಯ

<><><*><><<>

ಪಶ್ಚಿಮ ಬಂಗಾಳದ ದಕ್ಷಿಣ ೨೪ ಪರಗಣ ಜಿಲ್ಲೆಯ ಫಾಲ್ಟಾ ವಿಧಾನಸಭಾ ಕ್ಷೇತ್ರದಲ್ಲಿ ಸಂಪೂರ್ಣ ಮತದಾನ ಪ್ರಕ್ರಿಯೆಯನ್ನು ರದ್ದುಗೊಳಿಸುವ ಕ್ರಮವನ್ನು ಚುನಾವಣಾ ಆಯೋಗ ತೆಗೆದುಕೊಂಡಿದೆ. ಸಹಾಯಕ ಮತಗಟ್ಟೆಗಳು ಸೇರಿದಂತೆ ಎಲ್ಲಾ ೨೮೫ ಮತಗಟ್ಟೆಗಳಲ್ಲಿ ಈ ತಿಂಗಳ ೨೧ ರಂದು ಮರು ಮತದಾನ ನಡೆಯಲಿದೆ. ಮತಗಳ ಎಣಿಕೆ ಕಾರ್ಯ ಇದೇ ೨೪ ರಂದು ಜರುಗಲಿದೆ. ಏಪ್ರಿಲ್ ೨೯ ರಂದು ನಡೆದ ಮತದಾನದ ಸಮಯದಲ್ಲಿ ಗಂಭೀರ ಚುನಾವಣಾ ಅಪರಾಧಗಳು ಕಂಡುಬಂದ ಹಿನ್ನಲೆಯಲ್ಲಿ ವರದಿಗಳನ್ನು ಅನುಸರಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಆಯೋಗ ಹೇಳಿದೆ.

<><><*><><<>

ಪಶ್ಚಿಮ ಬಂಗಾಳದ ದಕ್ಷಿಣ ೨೪ ಪರಗಣ ಜಿಲ್ಲೆಯ ೧೫ ಮತಗಟ್ಟೆಗಳಲ್ಲಿ ನಿನ್ನೆ ನಡೆದ ಮರುಮತದಾನದಲ್ಲಿ ಸುಮಾರು ಶೇಕಡಾ ೯೦ ರಷ್ಟು ಮತದಾನ ದಾಖಲಾಗಿದೆ. ಮಾಗ್ರಾಹತ್ ಪಶ್ಚಿಮ ಕ್ಷೇತ್ರದ ೧೧ ಮತ್ತು ಡೈಮಂಡ್ ಹಾರ್ಬರ್ ಕ್ಷೇತ್ರದ ೪ ಮತಗಟ್ಟೆಗಳಲ್ಲಿ ನಡೆದ ಈ

ಪ್ರಕ್ರಿಯೆಯು ಒಟ್ಟಾರೆಯಾಗಿ ಶಾಂತಿಯುತವಾಗಿ ಮುಕ್ತಾಯಗೊಂಡಿದೆ. ಚುನಾವಣಾ ವೀಕ್ಷಕರು ಮತ್ತು ರಿಟರ್ನಿಂಗ್ ಅಧಿಕಾರಿಗಳ ವರದಿಯ ಆಧಾರದ ಮೇಲೆ ಚುನಾವಣಾ ಆಯೋಗವು ಈ ಮರುಮತದಾನಕ್ಕೆ ಆದೇಶಿಸಿತ್ತು. ಈ ಮೊದಲು ಏಪ್ರಿಲ್ ೨೯ ರಂದು ನಡೆದ ಎರಡನೇ ಹಂತದ ಚುನಾವಣೆಯ ಸಂದರ್ಭದಲ್ಲಿ ಈ ಮತಗಟ್ಟೆಗಳಲ್ಲಿ ಅಕ್ರಮಗಳು ನಡೆದಿದ್ದವು. ಇದೇ ವೇಳೆ, ಪಶ್ಚಿಮ ಬಂಗಾಳ ಸೇರಿದಂತೆ ಕೇರಳ, ತಮಿಳುನಾಡು, ಅಸ್ಸಾಂ ಮತ್ತು ಪುದುಚೇರಿ ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭಾ ಚುನಾವಣೆಯ ಮತ ಎಣಿಕೆಯು ನಾಳೆ ನಡೆಯಲಿದೆ. ಅಸ್ಸಾಂನ ೧೨೬, ಕೇರಳದ ೧೪೦ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ಏಪ್ರಿಲ್ ೯ ರಂದು ಮತದಾನ ನಡೆದಿತ್ತು. ಹಾಗೆಯೇ, ತಮಿಳುನಾಡಿನ ೨೩೪ ಕ್ಷೇತ್ರಗಳಿಗೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ೧೫೨ ಸ್ಥಾನಗಳಿಗೆ ಏಪ್ರಿಲ್ ೨೩ ರಂದು ಮತದಾನವಾಗಿತ್ತು. ಪಶ್ಚಿಮ ಬಂಗಾಳದ ಎರಡನೇ ಹಂತದ ೧೪೨ ಕ್ಷೇತ್ರಗಳಿಗೆ ಏಪ್ರಿಲ್ ೨೯ ರಂದು ಮತದಾನ ಪ್ರಕ್ರಿಯೆ ಪೂರ್ಣಗೊಂಡಿದೆ.

<>><><*><><<>

ಪಶ್ಚಿಮ ಬಂಗಾಳ ಚುನಾವಣೆಗಳಲ್ಲಿ ಮತಎಣಿಕೆ ಮೇಲ್ವಿಚಾರಕರಾಗಿ ಕೇಂದ್ರ ಸರ್ಕಾರಿ ನೌಕರರನ್ನು ಮಾತ್ರ ನೇಮಿಸುವ ಚುನಾವಣಾ ಆಯೋಗದ ನಿರ್ಧಾರದಲ್ಲಿ ಹಸ್ತಕ್ಷೇಪ ಮಾಡಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ನ್ಯಾಯಮೂರ್ತಿ ಪಿ.ಎಸ್.ನರಸಿಂಹ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು, ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನಿರ್ದೇಶಿಸಿದೆ. ಈ ನಿರ್ಧಾರವನ್ನು ಪ್ರಶ್ನಿಸಿದ್ದ ತೃಣಮೂಲ ಕಾಂಗ್ರೆಸ್‌ಗೆ ಈ ತೀರ್ಪು ಹಿನ್ನಡೆಯಾಗಿದೆ.

<>><><*><><<>

ಕೇಂದ್ರ ಕಾರ್ಮಿಕ, ಉದ್ಯೋಗ ಹಾಗೂ ಯುವಜನ ವ್ಯವಹಾರಗಳ ಸಚಿವ ಡಾ.ಮನ್ಸುಖ್ ಮಾಂಡವೀಯಾ ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರಕ್ಕೆ ಭೇಟಿ ನೀಡಲಿದ್ದು, ನೂತನ ಇಎಸ್‌ಐಸಿ ಆಸ್ಪತ್ರೆ ಉದ್ಘಾಟಿಸಲಿದ್ದಾರೆ. ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ೧೦೦ ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ನಿರ್ಮಾಣವಾಗಿದ್ದು, ಕೇಂದ್ರ ಸಚಿವರು ಇದನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಸಂಸದ ಡಾ.ಕೆ.ಸುಧಾಕರ್, ಶಾಸಕ ಧೀರಜ್ ಮುನಿರಾಜು, ಮತ್ತಿತರ ಗಣ್ಯರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<>><><*><><<>

ಪದವಿಪೂರ್ವ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ನೀಟ್-ಯುಜಿ ದೇಶಾದ್ಯಂತ ಇಂದು ನಡೆಯಲಿದೆ. ಈ ಪರೀಕ್ಷೆ ಮಧ್ಯಾಹ್ನ ೨ ಗಂಟೆಗೆ ಪ್ರಾರಂಭವಾಗಿ ಸಂಜೆ ೫ ಗಂಟೆಗೆ ಕೊನೆಗೊಳ್ಳಲಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಮತ್ತು ಶಿಕ್ಷಣ ಸಚಿವಾಲಯದ ಅನುಮೋದನೆಯೊಂದಿಗೆ ಪದವಿಪೂರ್ವ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ೨೦೧೯ ರಿಂದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ನೀಟ್-ಯುಜಿ ಪರೀಕ್ಷೆಯನ್ನು ನಡೆಸುತ್ತಿದೆ. ಅಭ್ಯರ್ಥಿಗಳಿಗೆ ಪರೀಕ್ಷಾ ಸಂಸ್ಥೆ ನಿರ್ದಿಷ್ಟ ಮಾರ್ಗಸೂಚಿಗಳನ್ನು ನೀಡಿದೆ. ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರಗಳ ಜೊತೆಗೆ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್ ಅಥವಾ ಪಡಿತರ ಚೀಟಿಯಂತಹ ಒಂದು ಮೂಲ ಫೋಟೋ ಗುರುತಿನ ಪುರಾವೆಯನ್ನು ಹೊಂದಿರಬೇಕು.

<>><><*><><<>

ದೇಶದ ಸಶಸ್ತ್ರ ಪಡೆಗಳ ಶೌರ್ಯ ಕೇವಲ ಯುದ್ಧಭೂಮಿಗೆ ಸೀಮಿತವಾಗದೆ ವಿಪತ್ತುಗಳ ಸಂದರ್ಭಗಳಲ್ಲಿಯೂ ಜನರಿಗೆ ಸಹಾಯವನ್ನೂ ನೀಡುತ್ತವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಆಪರೇಷನ್ ಸಿಂಧೂರ್‌ನ ಮೊದಲ ವಾರ್ಷಿಕೋತ್ಸವದ ಮುನ್ನ ದೆಹಲಿಯಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಸೈನಿಕರ ಅಪ್ರತಿಮ ಶೌರ್ಯ, ಆಪರೇಷನ್ ಸಿಂಧೂರ್ ಅನ್ನು ಭಾರತದ ಸೇನಾ ಇತಿಹಾಸದಲ್ಲಿ ಸುವರ್ಣ ಅಧ್ಯಾಯವನ್ನಾಗಿ ಮಾಡಿದೆ ಎಂದು ಶ್ಲಾಘಿಸಿದ್ದಾರೆ. 'ದೇಶ ಮೊದಲು, ಸ್ವಾರ್ಥಕ್ಕಿಂತ ಸೇವೆ ಮಿಗಿಲು' ಎಂಬ ಅವರ ನೀತಿಯು ಪ್ರಾಚೀನ ಕಾಲದಿಂದ ಇಂದಿನ ಕಾರ್ಯಾಚರಣೆಗಳವರೆಗೆ ಭಾರತದ ಮಿಲಿಟರಿ ಸಂಪ್ರದಾಯಗಳನ್ನು ವ್ಯಾಖ್ಯಾನಿಸುತ್ತಲೇ ಇದೆ ಎಂದು ಅವರು ಹೇಳಿದರು. ಸಶಸ್ತ್ರ ಪಡೆಗಳು ಯುದ್ಧಭೂಮಿಯಲ್ಲಿ ಮತ್ತು ನೈಸರ್ಗಿಕ ವಿಕೋಪಗಳಿಂದ ಪೀಡಿತ ಜನರಿಗೆ ಸೇವೆ ಸಲ್ಲಿಸುವಲ್ಲಿ ಧೈರ್ಯವನ್ನು ಪ್ರದರ್ಶಿಸಿವೆ ಎಂದು ರಕ್ಷಣಾ ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

<>><><*><><<>

ನೀತಿ ಆಯೋಗದ ಪೂರ್ಣಾವಧಿ ಸದಸ್ಯರಾಗಿ ನೇಮಕಗೊಂಡ ಡಾ. ಆರ್. ಬಾಲಸುಬ್ರಮಣಿಯಂ ಮತ್ತು ಡಾ. ಜೋರಾಮ್ ಅನಿಯಾ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿಯವರು, ಅವರ ಅನುಭವ ಮತ್ತು ವಿವಿಧ ವಿಷಯಗಳ ಬಗ್ಗೆ ಆಳವಾದ ತಿಳುವಳಿಕೆಯು ನೀತಿ ನಿರೂಪಣೆಯನ್ನು ಹೆಚ್ಚು ಬಲಪಡಿಸುತ್ತದೆ ಎಂದು ಹೇಳಿದರು. ಅವರ ಕೊಡುಗೆಗಳು ವಿವಿಧ ಕ್ಷೇತ್ರಗಳಲ್ಲಿ ನಾವೀನ್ಯತೆ ಮತ್ತು ಬೆಳವಣಿಗೆಗೆ ಸಹಾಯ ಮಾಡುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಕ್ಯಾಬಿನೆಟ್ ಸಚಿವಾಲಯವು

ಡಾ. ಬಾಲಸುಬ್ರಮಣಿಯಂ ಮತ್ತು ಡಾ. ಅನಿಯಾ ಅವರ ನೇಮಕಾತಿಯ ಬಗ್ಗೆ ಗೆಜೆಟ್ ಅಧಿಸೂಚನೆಯ ಮೂಲಕ ತಿಳಿಸಿದೆ.

<>><><*><><<>

ದೇಶದ ವಿಪತ್ತು ನಿರ್ವಹಣಾ ವ್ಯವಸ್ಥೆಯನ್ನು ಆಧುನೀಕರಿಸುವ ನಿಟ್ಟಿನಲ್ಲಿ ಕೇಂದ್ರ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ನಿನ್ನೆ ಸ್ವದೇಶಿ ತಂತ್ರಜ್ಞಾನದ 'ಸೆಲ್ ಬ್ರಾಡ್‌ಕಾಸ್ಟ್ ಸಿಸ್ಟಮ್' ಅನ್ನು ಉದ್ಘಾಟಿಸಿದರು.  ದೂರಸಂಪರ್ಕ ಇಲಾಖೆಯ ಸಿ-ಡಾಟ್, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಮತ್ತು ಗೃಹ ಸಚಿವಾಲಯದ ಸಹಯೋಗದಲ್ಲಿ ಈ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದೆ. ಲೋಕಾರ್ಪಣೆಯ ಅಂಗವಾಗಿ ನಿನ್ನೆ ಮಧ್ಯಾಹ್ನ ದೇಶಾದ್ಯಂತ ಯಶಸ್ವಿ ಪ್ರಾಯೋಗಿಕ ಪರೀಕ್ಷೆ ನಡೆಸಲಾಗಿದ್ದು, ನಾಗರಿಕರ ಮೊಬೈಲ್ ಫೋನ್‌ಗಳಿಗೆ ಸೈರನ್ ಶಬ್ದದೊಂದಿಗೆ ತುರ್ತು ಎಚ್ಚರಿಕೆ ಸಂದೇಶಗಳನ್ನು ರವಾನಿಸಲಾಯಿತು. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಈ ವ್ಯವಸ್ಥೆಯು ಲಕ್ಷಾಂತರ ಜನರಿಗೆ ಕ್ಷಣಾರ್ಧದಲ್ಲಿ ಭೌಗೋಳಿಕ ಆಧಾರಿತ ಎಚ್ಚರಿಕೆಗಳನ್ನು ತಲುಪಿಸುವ ಮೂಲಕ ವಿಪತ್ತು ನಿರ್ವಹಣೆಯಲ್ಲಿ ಕ್ರಾಂತಿಕಾರಿ ಬದಲಾವಣೆ ತರಲಿದೆ ಎಂದರು.  ಸಾಂಪ್ರದಾಯಿಕ ಎಸ್‌ಎಂಎಸ್ ವ್ಯವಸ್ಥೆಗಿಂತ ವೇಗವಾಗಿರುವ ಈ ತಂತ್ರಜ್ಞಾನವು ನೆಟ್‌ವರ್ಕ್ ದಟ್ಟಣೆಯ ನಡುವೆಯೂ ನಿಖರವಾಗಿ ಕಾರ್ಯನಿರ್ವಹಿಸುತ್ತದೆ. ದಿಢೀರ್ ಪ್ರವಾಹ ಅಥವಾ ಅನಿಲ ಸೋರಿಕೆಯಂತಹ ತುರ್ತು ಸಂದರ್ಭಗಳಲ್ಲಿ ವಿವಿಧ ಭಾಷೆಗಳಲ್ಲಿ ಎಚ್ಚರಿಕೆ ನೀಡುವ ಮೂಲಕ ನಾಗರಿಕರ ಸುರಕ್ಷತೆ ಮತ್ತು ಸಾರ್ವಜನಿಕ ನಂಬಿಕೆಯನ್ನು ಇದು ಬಲಪಡಿಸುತ್ತದೆ.

<>><><*><><<>

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದಿನಿಂದ ಜಮೈಕಾ, ಸುರಿನಾಮ್ ಮತ್ತು ಟ್ರಿನಿಡಾಡ್ ಮತ್ತು ಟೊಬಾಗೊ ದೇಶಗಳಿಗೆ ಅಧಿಕೃತ ಪ್ರವಾಸ ಕೈಗೊಂಡಿದ್ದು, ಈ ಪ್ರವಾಸವು ಈ ತಿಂಗಳ ೧೦ ರವರೆಗೆ ಮುಂದುವರಿಯಲಿದೆ. ಇಂದು ಬೆಳಗ್ಗೆ ಸಚಿವರು ಜಮೈಕಾದ ಕಿಂಗ್‌ಸ್ಟನ್ ತಲುಪಿದ್ದಾರೆ. ಈ ಮೂರೂ ದೇಶಗಳು 'ಗಿರ್ಮಿಟಿಯಾ' ಸಮುದಾಯದ ಉಪಸ್ಥಿತಿಯಿಂದಾಗಿ ಭಾರತದೊಂದಿಗೆ ವಿಶೇಷ ಸಾಂಸ್ಕೃತಿಕ ಮತ್ತು ಐತಿಹಾಸಿಕ ಸಂಬಂಧವನ್ನು ಹೊಂದಿವೆ. ಈ ಭೇಟಿಯ ಅವಧಿಯಲ್ಲಿ ಸಚಿವ ಡಾ. ಜೈಶಂಕರ್ ಅವರು ಈ ರಾಷ್ಟ್ರಗಳ ಪ್ರಮುಖ ನಾಯಕರನ್ನು ಭೇಟಿ ಮಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ವಿದೇಶಾಂಗ ಸಚಿವರೊಂದಿಗೆ ನಡೆಸುವ ಚರ್ಚೆಯಲ್ಲಿ ದ್ವಿಪಕ್ಷೀಯ ಸಂಬಂಧಗಳ ಎಲ್ಲಾ ಆಯಾಮಗಳು ಹಾಗೂ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳು ಒಳಗೊಂಡಿರಲಿವೆ. ಈ

ಭೇಟಿಯು ಜಮೈಕಾ, ಸುರಿನಾಮ್ ಮತ್ತು ಟ್ರಿನಿಡಾಡ್ ಮತ್ತು ಟೊಬಾಗೊ ದೇಶಗಳೊಂದಿಗೆ ಭಾರತದ ಸಹಕಾರ ವೇಗವನ್ನು ಹೆಚ್ಚಿಸುವ ನಿರೀಕ್ಷೆಯಿದೆ.

<>><><*><><<>

ಚೆನ್ನೈನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ, ಮುಂಬೈ ಇಂಡಿಯನ್ಸ್ ತಂಡವನ್ನು ೮ ವಿಕೆಟ್‌ಗಳಿಂದ ಸೋಲಿಸಿತು. ಮುಂಬೈ ಇಂಡಿಯನ್ಸ್ ತಂಡ ನೀಡಿದ, ೧೬೦ ರನ್‌ಗಳ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ೧೮.೧ ಓವರ್‌ಗಳಲ್ಲಿ ೨ ವಿಕೆಟ್‌ಗಳ ನಷ್ಟಕ್ಕೆ ೧೬೦ ರನ್ ಗಳಿಸಿತು. ಇದಕ್ಕೂ ಮೊದಲು ಮುಂಬೈ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೫೯ ರನ್ ಗಳಿಸಿತು. ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಮತ್ತು ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಸೆಣಸಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಅಹ್ಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ಸಂಜೆ ೭.೩೦ ಕ್ಕೆ ಆರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ೧೨.೦೫ ಕ್ಕೆ ><><<>